ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ರವರ ನ್ಯಾಯಾಲಯ, ಮಳವಳ್ಳಿ.

ಸಿಸಿ ನಂಃ **55/2017**

| | | |
|---|---|---|
| ಹೆಸರು | ಸಿ.ಆರ್. ರಮೇಶ್ | ಸಿ.ಡಬ್ಲ್ಯೂ8 |
| ತಂದೆಯ ಹೆಸರು | ರಾಮಯ್ಯ | ಪಿ.ಡಬ್ಲ್ಯೂ4 |
| ವಯಸ್ಸು | 64 ವರ್ಷ | |
| ಉದ್ಯೋಗ | ನಿವೃತ್ತ ಪಿ.ಎಸ್.ಐ. | |
| ವಾಸ ಸ್ಥಳ | ಮಂಡ್ಯ | |

ಸಾಕ್ಷಿಗೆ ದಿನಾಂಕಃ **27.02.2026** ರಂದು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಎ ಪಿ ಪಿ ರವರಿಂದ .

ನಾನು 2015 ರಿಂದ 2021 ರವರೆಗೆ ಹಲಗೂರು ಪೊಲೀಸ್ ಠಾಣೆಯಲ್ಲಿ ಪಿಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2) ದಿ: 12.12.2015 ರಂದು ನಾನು ಠಾಣಾ ಪ್ರಭಾರೆಯಲ್ಲಿ ಇದ್ದಾಗ ಬೆಳಿಗ್ಗೆ 8.30 ರ ಸಮಯದಲ್ಲಿ ಪಿ ಎಸ್ ಐ ರವರು ಮೌಖಿಕವಾಗಿ ನನಗೆ ಸೂಚನೆ ನೀಡಿ ಮಂಡ್ಯ ಸರ್ಕಾರಿ ಅಸ್ಪತ್ರೆಯಲ್ಲಿ ಚಾಸಾ 1 ರವರು ಹಲ್ಲೆಯ ಹಿನ್ನೆಲೆಯಲ್ಲಿ ದಾಖಲಾಗಿದ್ದು ಅವರ ಹೇಳಿಕೆಯನ್ನು ಪಡೆದುಕೊಳ್ಳುವಂತೆ ಹೇಳಿದ ಮೇರೆಗೆ ನಾನು ಮಂಡ್ಯ ಅಸ್ಪತ್ರೆಗೆ ತೆರಳಿ ವಾರ್ಡ ನಂ.1 ರಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಚಾಸಾ-1 ರವರ ಹೇಳಿಕೆಯನ್ನು ಪಡೆದು ಠಾಣೆಗೆ ಹಾಜರಾಗಿ ಮಧ್ಯಾಹ್ಯ 1.00 ಗಂಟೆಗೆ ಠಾಣಾ ಗುನ್ನೇ ಸಂಖ್ಯೆ 296/2015 ರಂತೆ ಪ್ರಕರಣ ದಾಖಲು ಮಾಡಿ ಪ್ರ.ವ. ವರದಿಯನ್ನು ತಯಾರು ಮಾಡಿರುತ್ತೇನೆ. ನಿಪಿ 1 ರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ 1 ಬಿ ಎಂಧು, ಪ್ರ. ವ. ವರದಿಯನ್ನು ನಿಪಿ 4 ಎಂದು, ಸಾಕ್ಷಿಯ ಸಹಿಯನ್ನು ನಿಪಿ 4 ಎ ಎಂದು ಗುರುತಿಸಲಾಯಿತು. ಅದೇ ದಿನ ಮಧ್ಯಾಹ್ನ ಘಟನಾ ಸ್ಥಳಕ್ಕೆ ಭೇಟಿ ನೀಡಿ, ಚಾಸಾ 3 ರವರು ತೋರಿಸಿದ ಸ್ಥಳದಲ್ಲಿ ಚಾಸಾ 5 ಮತ್ತು 6 ರವರ ಸಮಕ್ಷಮ ನಿಪಿ-3 ರಂತೆ ಪಂಚನಾಮೆ ಜರುಗಿಸಿರುತ್ತೇನೆ. ಸಾಕ್ಷಿಯ ಸಹಿಯನ್ನು ನಿಪಿ 3 ಬಿ ಎಂದು ಗುರುತಿಸಲಾಯಿತು. ಸದರಿ ಕಾಲಕ್ಕೆ ಕೃತ್ಯಕ್ಕೆ ಬಳಸಿದ ಕಲ್ಲನ್ನು ಅಮಾನತ್ತು ಪಡಿಸಿಕೊಂಡು ಮಾಲು ಪಟ್ಟಿ ತಯಾರು ಮಾಡಿರುತ್ತೇನೆ. ಸದರಿ ನಾನು ಅಮಾನತ್ತು ಪಡಿಸಿಕೊಂಡ ಕಲ್ಲು ಈಗ

ನೋಡುತ್ತಿರುವ ಮು.ಮಾಲು-1 ಆಗಿರುತ್ತದೆ. ಚಾಸಾ-3 ಮತ್ತು 4 ರವರ ಹೇಳಿಕೆಯನ್ನು ದಾಖಲು ಮಾಡಿರುತ್ತೇನೆ.

3) ದಿನಾಂಕ 15.12.2015 ರಂದು ಚಾಸಾ-1 ರವರ ಮರು ಹೇಳಿಕೆ ಹಾಗೂ ಚಾಸಾ-2 ರವರ ಹೇಳಿಕೆಯನ್ನು ಪಡೆದಿರುತ್ತೇನೆ. 16.12.2015 ರಂದು ಆರೋಪಿಯನ್ನು ದಸ್ತಗಿರಿ ಮಾಡಿ ಠಾಣಾ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ. ದಿನಾಂಕ 03.02.2016 ರಂದು ಚಾಸಾ-1 ರವರ ಗಾಯದ ಪ್ರಮಾಣಪತ್ರವನ್ನು ಸ್ವೀಕರಿಸಿರುತ್ತೇನೆ. ಅದನ್ನು ನಿಪಿ-5 ಎಂದು, ಸಾಕ್ಷಿಯ ಸಹಿಯನ್ನು ನಿಪಿ 5 ಎ ಎಂದು ಗುರುತಿಸಲಾಯಿತು. ದಿನಾಂಕ 02.03.2017 ರಂದು ತನಿಖೆ ಮುಕ್ತಾಯಗೊಳಿಸಿ ಆರೋಪಿಯ ವಿರುದ್ದ ದೋಷರೋಪಣೆ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

<u>ಪಾಟೀ ಸವಾಲುಃ ಆರೋಪಿತರ ಪರ ಃ ಶ್ರೀ ಎ.ಎಂ.ಎಂ. ವಕೀಲರಿಂದಃ</u>

4) ನಾನು ಆಸ್ಪತ್ರೆಗೆ ತೆರಳಿ ಚಾಸಾ-1 ರವರ ಹೇಳಿಕೆ ಪಡೆದಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಚಾಸಾ-1 ರವರಿಗೆ ಸಹಾಯ ಮಾಡಲು ಆರೋಪಿಯ ವಿರುದ್ದ ಸುಳ್ಳು ಪ್ರಕರಣ ದಾಖಲು ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಘಟನಾ ಸ್ಥಳಕ್ಕೆ ಬೇಟಿ ನೀಡಿ ಸ್ಥಳ ಮಹಜರ್ ಜರುಗಿಸಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಯಾವುದೇ ಸಾಕ್ಷಿದಾರರನ್ನು ವಿಚಾರಣೆ ಮಾಡಿಲ್ಲ ಎಂದರೆ ಸರಿಯಲ್ಲ.ಮು.ಮಾಲು-1 ರ ರೀತಿವು ಎಲ್ಲ ಕಡೆ ಸಿಗುತ್ತವೆ ಎಂದರೆ ಸರಿ. ಚಾಸಾ-1 ರವರ ಮಾತುಕೇಳಿ ಮು.ಮಾಲು-1 ರ ಸಂಬಂದವಾಗಿ ಅಮಾನತ್ತು ಪಡಿಸಿಕೊಂಡಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಚಾಸಾ-1 ರವರ ಮರು ಹೇಳಿಕೆ ಚಾಸಾ-2 ರವರ ಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ಸುಳ್ಳು ಗಾಯದ ಪ್ರಮಾಣಪತ್ರವನ್ನು ಸೃಷ್ಟಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಯು ಚಾಸಾ-1 ರವರ ವಿರುದ್ದ ಗಲಾಟೆ ಮಾಡದೇ ಇದ್ದರು ಚಾಸಾ-1 ರವರೆ ಬಿದ್ದು ಗಾಯಮಾಡಿಕೊಂಡಿದ್ದರೂ ಸಹ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿಯು ಚಾಸಾ-1 ರವರಿಗೆ ಹಲ್ಲೆ ಮಾಡಿಲ್ಲ ಎಂದರೆ ಸರಿಯಲ್ಲ. ಚಾಸಾ-1 ರವರ ಮಾತುಕೇಳಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸುಳ್ಳು ದೋಷರೋಪಣೆ ಪಟ್ಟಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇರುವುದಿಲ್ಲ.

ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು.

ಓ ಹೇ ಕೇ ಸ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಮಳವಳ್ಳಿ.